**File No.CPIKLB-ADM20TBS/1/2023-ADMN**

ಕರ್ನಾಟಕ ಸರ್ಕಾರ

ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ಐವಾನ್.ಎ.ಶಾಹಿ ಬಡಾವಣೆ, ಕಲಬುರಗಿ

ಸಂಖ್ಯೆ: ಸಿ2(2)/ಆಡಳಿತ/ಕಾ,ಸ್ವ.ಹೆ.ಬಡ್ತಿ/26/2023-24 (II) ದಿನಾಂಕ: 30/01/2024

ಜ್ಞಾಪನ

ವಿಷಯ: ಶಾಲಾ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಮತ್ತು ತತ್ಸಮಾನ ಗ್ರೂಪ್-'ಬಿ' ವೃಂದದ ಅಧಿಕಾರಿಗಳಿಗೆ 15 ವರ್ಷಗಳ ಸ್ವಯಂಚಾಲಿತ ವೇತನ ಬಡ್ತಿ ಮಂಜೂರು ಮಾಡುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 250 ಡಿಪಿಐ 2006 ದಿನಾಂಕ: 22/07/2008.
2) ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 464 ಡಿಪಿಐ 2008 ದಿನಾಂಕ: 06/01/2009.
3) ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 31 ಎಸ್‌ಆರ್‌ಪಿ 2007() ದಿನಾಂಕ: 14/08/2008.
4) ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 30 ಎಸ್‌ಆರ್‌ಪಿ 2012 ದಿನಾಂಕ: 31/01/2014
5) ಸರ್ಕಾರಿ ಆದೇಶ ಸಂಖ್ಯೆ : ಎಫ್‌ಡಿ 25 ಎಸ್‌ಆರ್‌ಪಿ 91 ದಿನಾಂಕ: 29/10/1991.
6) ಇಲಾಖಾ ಮುಂಬಡ್ತಿ ಸಮಿತಿ ಸಭೆ ನಡುವಳಿಗಳು ದಿನಾಂಕ: 26/10/2023.

ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ ಇವರನ್ನು ಉಲ್ಲೇಖ (1) ರನ್ವಯ ಶಾಲಾ ಶಿಕ್ಷಣ ಇಲಾಖೆಯ ಗ್ರೂಪ್-'ಬಿ' ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು/ತತ್ಸಮಾನ ವೃಂದದ ಅಧಿಕಾರಿಗಳಿಗೆ ನೇಮಕಾತಿ ಪ್ರಾಧಿಕಾರವೆಂದು ನೇಮಿಸಿ ಆದೇಶಿಸಿದೆ. ಸದರಿ ಗ್ರೂಪ್.'ಬಿ' ಅಧಿಕಾರಿಗಳಿಗೆ ಸ್ವಯಂ ಚಾಲಿತ ವೇತನ ಬಡ್ತಿ ಮಂಜೂರು ಮಾಡಲು ನೇಮಕಾತಿ ಪ್ರಾಧಿಕಾರವೇ ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಗ್ರೂಪ್-'ಬಿ' ವೃಂದದ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು/ತತ್ಸಮಾನ ಹುದ್ದೆಯಲ್ಲಿ ಯಾವುದೇ ಮುಂಬಡ್ತಿ ಇಲ್ಲದೆ ಸತತವಾಗಿ 15 ವರ್ಷಗಳ ಸೇವೆ ಪೂರ್ಣಗೊಳಿಸಿರುವ ಅಧಿಕಾರಿಗಳು/ನೌಕರರು ಸಮುಚಿತ ಮಾರ್ಗದ ಮುಖಾಂತರ ಹಿರಿಯ ವೇತನ ಶ್ರೇಣಿಗೆ ಸ್ವಯಂ ಚಾಲಿತ ಬಡ್ತಿ ಮಂಜೂರು ಮಾಡುವಂತೆ ಕೋರಿ ಪ್ರಸ್ತಾವನೆಗಳನ್ನು ಸಲ್ಲಿಸಿರುವರು. ಪ್ರಸ್ತಾವನೆಗಳನ್ನು ದಿನಾಂಕ: 26/10/2023 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಉಲ್ಲೇಖ (5) ರ ಹಿರಿಯ ವೇತನ ಶ್ರೇಣಿಗೆ ಸ್ವಯಂ ಚಾಲಿತ ವಿಶೇಷ ಬಡ್ತಿ ನಿಯಮಗಳಡಿ ಪರಿಶೀಲಿಸಿ, ನಿಯಮಗಳಡಿ ವಿಧಿಸಿರುವ ಷರತ್ತು/ನಿಬಂಧನೆಗಳಿಗೊಳಪಟ್ಟು ಈ ಕೆಳಕಂಡ ಅಧಿಕಾರಿಗಳಿಗೆ ಸ್ವಯಂ ಚಾಲಿತ ವೇತನ ಬಡ್ತಿ ಮಂಜೂರು ಮಾಡುವ ಕುರಿತು ನಿರ್ಣಯಿಸಿರುತ್ತಾರೆ. ಇಲಾಖಾ ಮುಂಬಡ್ತಿ ಸಮಿತಿ ಸಭೆಯ ನಿರ್ಣಯ ಹಾಗೂ ನಡವಳಿಯನ್ವಯ, ಸ್ವಯಂ ಚಾಲಿತ ವೇತನ ಬಡ್ತಿಗೆ ಅರ್ಹರಿರುವ ಈ ಕೆಳಕಂಡ ಗ್ರೂಪ್.'ಬಿ' ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು/ತತ್ಸಮಾನ ವೃಂದದ ಅಧಿಕಾರಿಗಳಿಗೆ ಅನುಬಂಧ-1 ರಲ್ಲಿ ಕಾಣಿಸಿದಂತೆ ಹಿರಿಯ ವೇತನ ಶ್ರೇಣಿಗೆ ಸ್ವಯಂ ಚಾಲಿತ ಬಡ್ತಿ ಮಂಜೂರು ಮಾಡಿ ವೇತನ ನಿಗದಿಪಡಿಸಿದೆ.

Digitally Signed by Dr.
Akash S
Date: 05-02-2024 16:03:27
Reason: Approved

(ಡಾ. ಆಕಾಶ್ ಎಸ್. ಭಾ.ಆ.ಸೇ)
ಅಪರ ಆಯುಕ್ತರು
ಶಾಲಾ ಶಿಕ್ಷಣ ಇಲಾಖೆ ಕಲಬುರಗಿ

ಪ್ರತಿಯನ್ನು:

1) ಮಹಾಲೇಖಪಾಲರು(ಲೆ&ಹ), ಕರ್ನಾಟಕ ಪಾರ್ಕ ಹೌಸ್ ರೋಡ್ ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಕರ್ನಾಟಕ ಸರ್ಕಾರದ ಸಚಿವಾಲಯ, ಬೆಂಗಳೂರು.
3) ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಮತ್ತು ಧಾರವಾಡ.
4) ಕಲಬುರಗಿ ವಿಭಾಗದ ಎಲ್ಲಾ ಜಿಲ್ಲಾ ಖಜಾನೆಗಳ ಉಪ ನಿರ್ದೇಶಕರಿಗೆ.
5) ಉಪ ನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ, ಬಳ್ಳಾರಿ ಮತ್ತು ರಾಯಚೂರು.
6) ಸಂಬಂಧಿಸಿದ ಡಯಟಗಳ ಉಪನಿರ್ದೇಶಕರು(ಅಭಿವೃದ್ಧಿ) ರವರಿಗೆ.
7) ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ರಾಯಚೂರು.